ನವಸಾಕ್ಷರ ಪುಸ್ತಕ ಮಾಲೆ ೩೭

ಕನ್ನಡ ಗೀತೆಗಳು

ಚೆ. ಶ್ರೀನಿವಾಸರಾಜು

ಒಂದೇ ಒಂದೇ ಒಂದೇ ಕರ್ನಾಟಕ ಒಂದೇ
ಇಂದೇ ಮುಂದೇ ಎಂದೇ ಕರ್ನಾಟಕ ಒಂದೇ

ಎಲ್ಲಾದರೂ ಇರು; ಎಂತಾದರೂ ಇರು;
ಎಂದೆಂದಿಗೂ ನೀ ಕನ್ನಡವಾಗಿರು.

ತಾಯಿ ಬಾರ, ಮೊಗವ ತೋರ, ಕನ್ನಡಿಗರ ಮಾತೆಯೆ!
ಹರಸು ತಾಯೆ, ಸುತರ ಕಾಯೆ, ನಮ್ಮ ಜನ್ಮದಾತೆಯೆ!

ಮುಂಗೋಳಿ ಕೂಗ್ಯಾವು ಮೂಡ್ಯಣ ಬೆಳಗಿ
ತಂಗಾಳಿ ಬೀಸ್ಯಾವು ತವರೀ ಹೂವರಳಿ

ಹೆಸರಾಯಿತು ಕರ್ನಾಟಕ
ಉಸಿರಾಗಲಿ ಕನ್ನಡ;

ಯೆಂಡ ಯೆಡ್ತಿ ಕನ್ನಡ್ ಪದಗೋಳ್
ಅಂದ್ರೆ ರತ್ನಂಗ್ ಪ್ರಾಣ!

ಏರಿಸಿ, ಹಾರಿಸಿ, ಕನ್ನಡದ ಬಾವುಟ!
ಓಹೊ, ಕನ್ನಡನಾಡು, ಆಹ ಕನ್ನಡನುಡಿ!

ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು
ಬದುಕು ಬಲುಹಿನ ನಿಧಿಯು ಸದಭಿಮಾನದ ಗೂಡು

ಲೋಕಶಿಕ್ಷಣ ನಿರ್ದೇಶನಾಲಯ

ನವಸಾಕ್ಷರ ಪುಸ್ತಕ ಮಾಲೆ – ೩೭

ಕನ್ನಡ ಗೀತೆಗಳು

ಚಿ. ಶ್ರೀನಿವಾಸರಾಜು



ಪ್ರಸಾರಾಂಗ
ಕನ್ನಡ ವಿಶ್ವವಿದ್ಯಾಲಯ
ಹಂಪಿ–೫೮೩ ೨೭೭

ಚೆಲುವ ಕನ್ನಡ ನಾಡಿನ ಬಗ್ಗೆ ಪ್ರೀತಿ, ಅಭಿಮಾನ ಉಕ್ಕುವ ಕವನಗಳ ವಸ್ತುವೆಂದರೆ ನಾಡು-ನುಡಿಯ ವೈಭವದ ಮತ್ತು ಸ್ಥಿತಿ-ಗತಿಗಳ ದರ್ಶನ. ಈ ಮನೋಧರ್ಮದ ಕೆಲವು ಕವನಗಳನ್ನು ಹಾಡಿಕೊಳ್ಳಲು, ಓದಿಕೊಳ್ಳಲು ಅನುಕೂಲವಾಗುವಂತೆ ಸಂಗ್ರಹಿಸಿ ಕೊಡಲಾಗಿದೆ. ನೂರಾರು ಉತ್ತಮ ರಚನೆಗಳಿದ್ದರೂ ಸ್ಥಳ ಸಂಕೋಚದಿಂದ ಕೆಲವನ್ನು ಮಾತ್ರ ಆರಿಸಿಕೊಡಲಾಗಿದೆ. ಕನ್ನಡ-ಕರ್ನಾಟಕ-ಕನ್ನಡಿಗನನ್ನು ಕುರಿತಂತೆ ಹೆಚ್ಚಾಗಿ ಮಾತು ಮಾತ್ರ ಕೇಳಿ ಬರುತ್ತಿರುವ ಈ ಸಂದರ್ಭದಲ್ಲಿ ನಮ್ಮ ಪರಂಪರೆಯ ಬಗ್ಗೆ ಅಭಿಮಾನವನ್ನು ಬಡಿದೆಬ್ಬಿಸಲು ಇಲ್ಲಿನ ರಚನೆಗಳು ಸಹಾಯಮಾಡಬಹುದು. ಈ ರೀತಿಯ ಹೆಚ್ಚಿನ ಓದಿಗೆ 'ಕನ್ನಡದ ಬಾವುಟ' ಮತ್ತು 'ಕನ್ನಡ ತಾಯಿಗೆ ನುಡಿ ನಮನ' ಕವನ ಸಂಕಲನಗಳನ್ನು ಗಮನಿಸಬಹುದು.

ಒಂದೇ ಕರ್ನಾಟಕ

ಕವಿ : ಅಂಬಿಕಾತನಯದತ್ತ

ಒಂದೇ ಒಂದೇ ಒಂದೇ ಕರ್ನಾಟಕ ಒಂದೇ

ಇಂದೇ ಮುಂದೇ ಎಂದೇ ಕರ್ನಾಟಕ ಒಂದೇ
ಜಗದೇಳಿಗೆಯಾಗುವದಿದೆ ಕರ್ನಾಟಕದಿಂದೆ

ಇಲ್ಲಿಯ ಜನ-ಮನ-ಭಾಷೆಯು ಕನ್ನಡವದು ಒಂದೇ
ಒಂದೇ ಜನವೂ ಮನವೂ ಕನ್ನಡಿಗರು ಎಂದೇ
ಕುಲವೊಂದೇ ಸ್ಥಲವೊಂದೇ ನೀತಿಯ ನೆಲೆಯೊಂದೇ
ಹೀಗೆನ್ನದ ಹೆರವರು ಅವರಿದ್ದರು ಒಂದೇ
ಇರದಿದ್ದರು ಒಂದೇ!
ಕನ್ನಡವೆಂದೂ ಒಪ್ಪದು ಕರ್ನಾಟಕ ನಿಂದೆ
ಒಂದೇ ಒಂದೇ ಒಂದೇ ಕರ್ನಾಟಕ ಒಂದೇ| |೧||

ಕನ್ನಡ ಮಾತೇ ಮಾತೆಯು, ಕರ್ನಾಟಕ ಒಂದೇ
ಅದು ದೈವತ ಅದು ಜೀವತ ಒಪ್ಪಿಹೆವದುವೆಂದೇ
ನಮ್ಮದು ನಿಮ್ಮದು ಅವರದು ಈ ಆಸ್ತಿಪಾಸ್ತೀ



ಅಂಬಿಕಾತನಯದತ್ತ (ದ.ರಾ.ಬೇಂದ್ರೆ)

ನಾಡಿಗೆ ತಾಯಿಗೆ ಸೇರಿದೆ, ಬೇರೆಯ ಮನೆ ನಾಸ್ತೀ
ಕನ್ನಡ ಕಾಯಕದಲ್ಲಿಲ್ಲವು ಕಮ್ಮೀ ಜಾಸ್ತೀ
ಇದನೊಪ್ಪದ ಹೆರವರು ಅವರಿದ್ದರು ಒಂದೇ
ಇರದಿದ್ದರು ಒಂದೇ!
ಕರ್ನಾಟಕ ಹಿತ-ವಿಹಿತವು ಕನ್ನಡ-ಕುಲದಿಂದೇ
ಒಂದೇ ಒಂದೇ ಒಂದೇ ಕರ್ನಾಟಕ ಒಂದೇ || ೨||

ಕನ್ನಡವೂ ಭಾರತವೂ ಜಗವೆಲ್ಲವೂ ಒಂದೇ
ತುಂಬಿದೆ ಕನ್ನಡ ಕುಲವನ್ನೊಪ್ಪುವ ಕುಲದಿಂದೇ
ಕನ್ನಡ ದೀಕ್ಷೆಯ ಹೊಂದಿದ ಪ್ರತಿಯೊಬ್ಬನು ಆರ್ಯ
ಕನ್ನಡ ತೇಜವು ಸಾರಲಿ ಕನ್ನಡಿಗರ ಕಾರ್ಯ
ಕನ್ನಡ ನಡೆ ಇರದವರೇ ಶೂದ್ರರು ಅನಿವಾರ್ಯ
ಇಂತರಿಯದ ಹೆರವರು ಅವರಿದ್ದರು ಒಂದೇ
ಇರದಿದ್ದರು ಒಂದೇ!
ಉಗ್ಗಡಿಸಿರಿ ನಾಸ್ತಿಗೆ ಜಯಜಯಜಯ ಜಯವೆಂದೇ
ಒಂದೇ ಒಂದೇ ಒಂದೇ ಕರ್ನಾಟಕ ಒಂದೇ || ೩ ||

ಮೆಟ್ಟುವ ನೆಲ ಕರ್ನಾಟಕ

ಕವಿ: ಕುವೆಂಪು

ಎಲ್ಲಾದರೂ ಇರು; ಎಂತಾದರೂ ಇರು;
ಎಂದೆಂದಿಗೂ ನೀ ಕನ್ನಡವಾಗಿರು.
ಕನ್ನಡ ಗೋವಿನ ಓ ಮುದ್ದಿನ ಕರು,
ಕನ್ನಡತನವೊಂದಿದ್ದರೆ ನೀನಮ್ಮಗೆ ಕಲ್ಪತರು!

ನೀ ಮೆಟ್ಟುವ ನೆಲ - ಅದೆ ಕರ್ನಾಟಕ
ನೀನೇರುವ ಮಲೆ - ಸಹ್ಯಾದ್ರಿ.
ನೀ ಮುಟ್ಟುವ ಮರ - ಶ್ರೀಗಂಧದ ಮರ;



ಶ್ರೀ ಕುವೆಂಪು

ನೀ ಕುಡಿಯುವ ನೀರ್ - ಕಾವೇರಿ.
ಪಂಪನನೋದುವ ನಿನ್ನಾ ನಾಲಗೆ
ಕನ್ನಡವೇ ಸತ್ಯ,
ಕುಮಾರವ್ಯಾಸನನಾಲಿಪ ಕಿವಿಯದು
ಕನ್ನಡವೇ ನಿತ್ಯ.

ಹರಿಹರ ರಾಘವರಿಗೆ ಎರಗುವ ಮನ,
ಹಾಳಾಗಿಹ ಹಂಪೆಗೆ ಕೊರಗುವ ಮನ,
ಪೆಂಪಿನ ಬನವಾಸಿಗೆ ಕರಗುವ ಮನ;-

ಬೆಳ್ಗೊಳ ಬೇಲೂರ್ಗಳ ನೆನೆಯುವ ಮನ,
ಜೋಗದ ಜಲಪಾತದಿ ಧುಮುಕುವ ಮನ,
ಮಲೆನಾಡಿಗೆ ಹೊಂಪುಳಿವೋಗುವ ಮನ;-

ಕಾಜಾಣಕೆ ಗಿಳಿ ಕೋಗಿಲೆಯಿಂಪಿಗೆ,
ಮಲ್ಲಿಗೆ ಸಂಪಗೆ ಕೇದಗೆ ಸೊಂಪಿಗೆ
ಮಾವಿನ ಹೊಂಗೆಯ ತಳಿರಿನ ತಂಪಿಗೆ
ರಸ ರೋಮಾಂಚನಗೊಳವಾತನ ಮನ

ಎಲ್ಲಿದ್ದರೆ ಏನ್? ಎಂತಿದ್ದರೆ ಏನ್?
ಎಂದೆಂದಿಗೂ ತಾನ್-
ಕನ್ನಡವೇ ಸತ್ಯ!
ಕನ್ನಡವೇ ನಿತ್ಯ!
ಅನ್ಯವೆನಲದೆ ಮಿಥ್ಯಾ!

ಹೊಸಗನ್ನಡದ ಹಾಡು

ಕವಿ:ಎಂ.ಗೋಪಾಲಕೃಷ್ಣ ಅಡಿಗ

ಇಂದು ಕೂಡ ಆಗದೆ,
ಕನ್ನಡವೊಂದಾಗದೆ?
ಭೇದದ ಹುಳಿ ನೀಗದೇ,
ಕಾಯಿಮನ ಮಾಗದೇ,
ಒಮ್ಮತದೊಗ್ಗಟ್ಟಿನ ಫಲ
'ನಮ್ಮ ಬಾಳ್ಗೆ ಬಾಗದೆ?
ಆಗದೇ, ಹೋಗದೇ?
ಕನ್ನಡವೊಂದಾಗದೆ?

ನನ್ನ ನಿನ್ನ ಕನ್ನಡ,
ಎಲ್ಲ ಜನದ ಕನ್ನಡ;
ಈರ, ಬೋರ, ಭಟ್ಟ,ಶೆಟ್ಟಿ,
ಕೂಲಿಗಾರ, ರೈತರ;
ಸುಸಂಸ್ಕೃತರ, ಅಸಂಸ್ಕೃತರ,
ಮಾನ್ಯರ, ಸಾಮಾನ್ಯರ;
ಈ ನೆಲ ಈ ನುಡಿ ನುಡಿಸುವ
ಎಲ್ಲ ಎಲ್ಲ ಬಾಯಿಯೂ;
ಮಾಗಲೆಂದು ಕಾದಿರುವೀ
ಎಲ್ಲ ಎಲ್ಲ ಕಾಯಿಯೂ
ಕನ್ನಡವೋ ಕನ್ನಡ

ನಮ್ಮ ಉಸುರು, ನಮ್ಮ ಕಸುವು ಕನ್ನಡ;
ನಮ್ಮ ಹೆಸರು, ನಮ್ಮ ಕಸುಬು ಕನ್ನಡ-



ಎಂ. ಗೋಪಾಲಕೃಷ್ಣ ಅಡಿಗ


ಕನ್ನಡವಿದು ಕನ್ನಡ,-
ಬನ್ನಿ ನಮ್ಮ ಸಂಗಡ
ಒಂದಾಗುವ ಎಂದೆದ್ದರೆ ತಡೆವ ಬಂಟರೆಲ್ಲಿ?
ಕನ್ನಡಜನ ಕವಿದೆದ್ದರೆ ನಿಲುವ ಗಂಡರೆಲ್ಲಿ?

ಕನ್ನಡಿಗರ ತಾಯಿ

ಕವಿ : ಎಂ. ಗೋವಿಂದ ಪೈ

ತಾಯೆ ಬಾರ, ಮೊಗವ ತೋರ, ಕನ್ನಡಿಗರ ಮಾತೆಯೆ!
ಹರಸು ತಾಯೆ, ಸುತರ ಕಾಯೆ, ನಮ್ಮ ಜನ್ಮದಾತೆಯೆ!
ನಮ್ಮ ತಪ್ಪನೆನಿತೊ ತಾಳ್ವೆ,
ಅಕ್ಕರೆಯಿಂದೆಮ್ಮನಾಳ್ವೆ;
ನೀನೆ ಕಣಾ ನಮ್ಮ ಬಾಳ್ವೆ,
ನಿನ್ನ ಮರೆಯಲೆಮ್ಮೆವು-
ತನು ಕನ್ನಡ, ಮನ ಕನ್ನಡ, ನುಡಿ ಕನ್ನಡವೆಮ್ಮವು.

ಹಣ್ಣನೀವ ಕಾಯನೀವ ಪರಿಪರಿಯ ಮರಂಗಳೊ,
ಪತ್ರಮೀವ ಪುಷ್ಪಮೀವ ಲತೆಯ ತರತರಂಗಳೊ,
ತೆನೆಯ ಕೆನೆಯ ಗಾಳಿಯೊ,
ಖಗಮೃಗೋರಗಾಳಿಯೊ,
ನದಿ ನಗರ ನಗಾಳಿಯೊ,
ಇಲ್ಲಿಲ್ಲದುದುಳಿದುದೆ?-
ಜೇನು ಸುರಿವ ಹಾಲು ಹರಿವ ದಿವಂ ಭೂಮಿಗಿಳಿದುದೆ?
ಹಳೆಯಬೀಡ ಬೇಲನಾಡ ಮಾಡಮೆನಿತೊ ಸುಂದರಂ!



ಎಂ.ಗೋವಿಂದ ಪೈ

ಬಿಳಿಯ ಕೊಳದ ಕಾರಕಳದ ನಿಡುಕರೆನಿತೊ ಬಂಧುರಂ!
ಇಲ್ಲಿಲ್ಲದ ಶಿಲ್ಪಮಿಲ್ಲ;
ನಿನ್ನ ಕಲ್ಲೆ ನುಡಿವುದಲ್ಲ!
ಹಿಂಗತೆಯಿನಿವಾಲ ಸೊಲ್ಲ
ನೆಮ್ಮ ತೃಷೆಗೆ ದಕ್ಕಿಸು-
ಹೊಸತು ಕಿನ್ನರಿಯಲಿ ನಿನ್ನ ಹಳೆಯ ಹಾಡನುಕ್ಕಿಸು!


ತನ್ನ ಮರೆಯ ಕಂಪನರಿಯದದನೆ ಹೊರಗೆ ಹುಡುಕುವ
ಮೃಗದ ಸೇಡು ನಮ್ಮ ಪಾಡು ಪರರ ನುಡಿಗೆ ಮಿಡುಕುವ!
ಕನ್ನಡ ಕಸ್ತೂರಿಯನ್ನ
ಹೊಸತುಸಿರಿಂ ತೀಡದನ್ನ
ಸುರಭಿ ಎಲ್ಲಿ? ನೀನದನ್ನ
ನವಶಕ್ತಿಯನೆಬ್ಬಿಸು-
ಹೊಸ ಸುಗಂಧದೊಸಗೆಯಿಂದ ಜಗದಿ ಹೆಸರ ಹಬ್ಬಿಸು!

ಕನ್ನಡ ತಾಯಿಯ ಸುಪ್ರಭಾತ

ಕವಿ : ಚಂದ್ರಶೇಖರ ಕಂಬಾರ

ಮುಂಗೋಳಿ ಕೂಗ್ಯಾವು ಮೂಡ್ಯಣ ಬೆಳಗಿ
ತಂಗಾಳಿ ಬೀಸ್ಯಾವು ತವರೀ ಹೂವರಳಿ
ಹೂ ಹೂವಿನೊಳಗೊಂದು ಕೈಲಾಸವರಳ್ಯಾವು
ಕೈಲಾಸ ಕೈಮುಗಿದು ಭೂಲೋಕಕಿಳಿದಾವು
ಸಾವಿರದ ಶರಣವ್ವ ಕನ್ನಡದ ತಾಯೇ ||ತಾಯೇ||

ಸೂಸುನಗೆಯಲಿ ಜಗದ ಲೇಸ ತುಳುಕಿಸುವವಳೆ
ಕಲ್ಲಿನ ಎದೆಯೊಳಗ ಹುಲ್ಲು ಚಿಗುರಿಸುವವಳೆ



ಚಂದ್ರಶೇಖರ ಕಂಬಾರ

ಹಕ್ಕಿ ಹಾರ್ಯಾಡ್ಯಾವು ಹಾಡೂತ, ಏನಂತ?
ಉಧೋ ನಿನ್ನ ಪಾದಕ್ಕೆ ಆದಿ ಮೂರುತಿಯೆ
ಸಾವಿರದ ಶರಣವ್ವ ಕನ್ನಡದ ತಾಯೇ ||ತಾಯೇ||

ಪಡುಗಡಲ ತೆರೆಗಳಲಿ ಪಾದ ತೊಳೆವವಳೆ
ಬೆಟ್ಟ ಬಯಲುಗಳನ್ನು ತೊಟ್ಟು ನಿಂತವಳೆ
ಮಲೆನಾಡ ಶಿಖರದಲಿ ಮಳೆಬಿಲ್ಲ ಮುಡಿದವಳೆ
ಅವ್ವಾ ಅಂದಾಗೊಮ್ಮೆ ಸಾಕಾರಗೊಂಬವಳೆ
ನಗೆಮೊಗದ ಜಗದಂಬೆ ಬೆಳಕಿನ ತಾಯೇ || ತಾಯೇ||

ಕುರಿತು ಓದದ ಕಾವ್ಯಪರಿಣತರ ಮಾತೆ
ಸಂತರ ಶರಣರ ಮಂತ್ರದ ಮಾತೆ
ಶಬ್ದಕ್ಕೆ ಬೆಳಕನ್ನ ಮುಡಿಸುವ ಕವಿಗಣ
ದಿನಬೆಳಗು ಹೊಗಳುವರು ನಿನ್ನ ಕೀರ್ತಿಯನೆ
ಸಾವಿರದ ಶರಣವ್ವ ಕನ್ನಡದ ತಾಯೇ ||ತಾಯೇ||

ಜಾಣಜಾಣೆಯರೆದೆಗೆ ಕನಸು ಕೊಡುವವಳೆ
ಬಾಗಿದವರಿಗೆ ಭಾಗ ಹೃದಯ ಕೊಡುವವಳೆ
ನಿನ್ಹಾಂಗ ಧರ್ಮದಲಿ ಧಾರಾಳತನದಲ್ಲಿ
ಈ ಭೂಮಿಯಲಿ ಕಾಣೆ ಧರೆಗೆ ದೊಡ್ಡವಳೇ
ಸಾವಿರದ ಶರಣವ್ವ ಕನ್ನಡದ ತಾಯೇ ||ತಾಯೇ||

ಮ್ಯಾಲೇಳು ಲೋಕಕ್ಕ ಕೀಳೇಳು ಲೋಕಕ್ಕ
ಅಧಿಕವಾಗಲಿ ಹಬ್ಬಿ ನಿನ್ನ ಕಾರಣಿಕ
ಹಾಲೊಕ್ಕಲಾಗಲಿ ಹೊನ್ನೊಕ್ಕಲಾಗಲಿ
ತೂಗು ತೊಟ್ಟಿಲ ಬೆಳ್ಳಿಬಟ್ಟಲದ ತಾಯೇ
ಸಾವಿರದ ಶರಣವ್ವ ಕನ್ನಡದ ತಾಯೇ ||ತಾಯೇ||

ಹೆಸರಾಯಿತು 'ಕರ್ನಾಟಕ'

ಕವಿ : ಚೆನ್ನವೀರ ಕಣವಿ

ಹೆಸರಾಯಿತು ಕರ್ನಾಟಕ
ಉಸಿರಾಗಲಿ ಕನ್ನಡ;
ಹಸಿಗೋಡೆಯ ಹರಳಿನಂತೆ
ಹುಸಿಹೋಗದ ಕನ್ನಡ.

ಹೊಸೆದ ಹಾಗೆ ಹುರಿಗೊಳ್ಳುವ
ಗುರಿ ತಾಗುವ ಕನ್ನಡ;
ಕುರಿತೋದದ ಪರಿಣತಮತಿ
ಅರಿತವರಿಗೆ ಹೊಂಗೊಡ.

ಪಡುಗಡಲಿನ ತೆರೆಗಳಂತೆ
ಹೆಡೆ ಬಿಚ್ಚುತ ಮೊರೆಯುವ
ಸಹ್ಯಾದ್ರಿಯ ಶಿಖರದಂತೆ
ಬಾನೆತ್ತರ ಕರೆಯುವ.
ಗುಡಿ-ಗೋಪುರ ಹೊಂಗಳಸಕೆ
ಚೆಂಬೆಳಕಿನ ಕನ್ನಡ;
ನಮ್ಮೆಲ್ಲರ ಮೈಮನಸಿನ
ಹೊಂಗನಸಿನ ಕನ್ನಡ.

ತ್ರಿಪದಿಯಿಂದ ಸಾಸಿರಪದಿ
ಸ್ವಚ್ಛಂದದ ಉಲ್ಲಸ.
ಭಾವಗೀತ, ಮಹಾಕಾವ್ಯ-
ವೀರ-ವಿನಯ ಸಮರಸ.



ಚೆನ್ನವೀರ ಕಣವಿ

ಹಳ್ಳಿ-ಊರು, ನಗರ-ಜಿಲ್ಲೆ
ಮೊಗದ ಹೊಗರು ಕನ್ನಡಿ;
ಎಲ್ಲ ದಿಸೆಗು ಚೆಲ್ಲುವರಿದ
ಚೈತನ್ಯದ ದಾಂಗುಡಿ.

ಹೆಸರಾಯಿತು ಕರ್ನಾಟಕ
ಉಸಿರಾಗಲಿ ಕರ್ನಾಟಕ;
ಹಸಿಗೋಡೆಯ ಹರಳಿನಂತೆ
ಹುಸಿಹೋಗದ ಕನ್ನಡ.

ಕರ್ನಾಟಕ ಗೀತ

ಕವಿ: ಕೆ. ಎಸ್. ನರಸಿಂಹಸ್ವಾಮಿ

ಪಡುವಣ ಕಡಲಿನ ನೀಲಿಯ ಬಣ್ಣ,
ಮುಡಿಯೊಳು ಸಂಜೆಯ ಅಂಚಿನ ಚಿನ್ನ,
ಹೊಳೆಗಳ ಸೆರಗಿನ ಪಚ್ಚೆಯ ಬಯಲು,
ಬಿರುಮಳೆಗಂಜದ ಬೆಟ್ಟದ ಸಾಲು,
ಹುಲಿ ಕಾಡಾನೆಗಳಲೆಯುವ ಕಾಡಿದು,
ಸಿರಿಗನ್ನಡ ನಾಡು!

ಕಲ್ಲಿಗೆ ಬಯಸಿದ ರೂಪವ ತೊಡಿಸಿ,
ಮುಗಿಲಿಗೆ ತಾಗುವ ಮೂರ್ತಿಯ ನಿಲಿಸಿ,
ದಾನ ಧರ್ಮಗಳ ಕೊಡುಗೈಯಾಗಿ,
ವೀರಾಗ್ರಣಿಗಳ ತೊಟ್ಟಿಲ ತೂಗಿ,
ಬೆಳಗಿದ ನಾಡಿದು, ಚಂದನಗಂಪಿನ
ಸಿರಿಗನ್ನಡ ನಾಡು!

ಇಲ್ಲಿ ಅರಳದಿಹ ಹೂವುಗಳಿಲ್ಲ;




ಕೆ.ಎಸ್.ನರಸಿಂಹಸ್ವಾಮಿ

ಹಾಡಲು ಬಾರದ ಹಕ್ಕಿಗಳಿಲ್ಲ-
ಸಾವಿರ ದೀಪಗಳರಮನೆಯೊಳಗೆ
ಶರಣೆನ್ನುವೆನೀ ವೀಣಾಧ್ವನಿಗೆ.
ಕನ್ನಡ ನಾಡಿದು;ಮಿಂಚುವ ಕಂಗಳ
ಸಿರಿಗನ್ನಡ ನಾಡು.

ಕನ್ನಡ ಪದಗೊಳು

ಕವಿ: ಜಿ. ಪಿ. ರಾಜರತ್ನಂ

ಯೆಂಡ ಯೆಡ್ತಿ ಕನ್ನಡ್ ಪದಗೊಳ್
ಅಂದ್ರೆ ರತ್ನಂಗ್ ಪ್ರಾಣ!
ಬುಂಡೇನ್ ಎತ್ತಿ ಕುಡಿದ್ಬುಟ್ಟಾಂದ್ರೆ-
ತಕ್ಕೊ! ಪದಗೊಳ್ ಬಾಣ!
ಬಗವಂತ್ ಏನ್ರ ಭೂಮಿಗ್ ಇಳದು
ನನ್‌ತಾಕ್ ಬಂದಾಂತ್ ಅನ್ನು;
ಪರ್‌ಗಿರೀಕ್ಸೆ ಮಾಡ್ತಾನ್ ಔನು-
ಬಕ್ತನ್‌ಮೇಲ್ ಔನ್ ಕಣ್ಣು!
'ಯೆಂಡ ಕುಡಿಯಾದ್ ಬುಟ್‌ಬುಡ್ ರತ್ನ!'
ಅಂತ್ ಔನ್ ಏನಾರ್ ಅಂದ್ರೆ-
ಮೂಗ್ ಮೂರ್ ಚೂರಾಗ್ ಮುರಸ್ಕೊಂತೀನಿ
ದೇವರ್ ಮಾತ್ಗ್ ಅಡ್ಬಂದ್ರೆ!
'ಯೆಂಡ ಬುಟ್ಟೆ ಯೆಡ್ತೀನ್ ಬುಟ್ ಬುಡ್!'
ಅಂತ್ ಔನ್ ಏನಾರ್ ಅಂದ್ರೆ
ಕಳದೋಯ್ತ್ ಅಂತ ಕುಣದಾಡ್ತೀನಿ
ದೊಡ್ಡ್ ಒಂದ್ ಕಾಟ!ತೊಂದ್ರೆ!
'ಕನ್ನಡ್ ಪದಗೊಳ್ ಆಡೋದ್ನೆಲ್ಲ



ಜಿ.ಪಿ.ರಾಜರತ್ನಂ

ನಿಲ್ಲೀಸ್ ಬುಡಬೇಕ್ ರತ್ನ!'
ಅಂತ್ ಔನ್ ಅಂದ್ರೆ-ದೇವ್ರ್ ಆದ್ರ್ ಏನು!
ಮಾಡ್ತೀನ್ ಔನ್ಗೆ ಖತ್ನ!

ಆಗ್ನೇಮಾಡೋ ಐಗೋಳ್ ಎಲ್ಲಾ
ದೇವ್ರು ಆಗ್ಲಿ-ಎಲ್ಲ!
ಕನ್ನಡ್ ಸುದ್ದೀಗ್ ಏನ್ರ ಬಂದ್ರೆ
ಮಾನಾ ವುಳಸಾಕಿಲ್ಲ!
ನರಕಕ್ ಇಳ್ಸಿ ನಾಲ್ಗೆ ಸೀಳ್ಸಿ
ಬಾಯ್ ಒಲಿಸಾಕಿದ್ರೂನೆ-
ಮೂಗ್ನಲ್ ಕನ್ನಡ್ ಪದವಾಡ್ತೀನಿ!
ನನ್ ಮನಸನ್ ನೀ ಕಾಣೆ!

ಯೆಂಡ ಓಗ್ಲಿ!ಯೆಡ್ತಿ ಓಗ್ಲಿ!
ಎಲ್ಲಾ ಕೊಚ್ಕೊಂಡ್ ಓಗ್ಲಿ!
ಪರ್ಪಂಚ್ ಇರೋತನಕ ಮುಂದೆ
ಕನ್ನಡ್ ಪದ್ಗೊಳ್ ನುಗ್ಲಿ!

ತೇರನೆಳೆವರು ನಾವು

ಕವಿ : ಜಿ. ಎಸ್. ಶಿವರುದ್ರಪ್ಪ

ತೇರನೆಳೆವರು ನಾವು-ಎಲ್ಲಿದ್ದರೇನು?
ಬೊಂಬಾಯಿ ಮದರಾಸು ಕಲ್ಕತ್ತ ಡೆಲ್ಲಿ
ಎಲ್ಲೆಂದರಲ್ಲಿ,
ಕನ್ನಡದ ಉಸಿರಾಡುವೆದೆಗಳಿರುವಲ್ಲಿ
ಕನ್ನಡದ ಸತ್ವಗಳ ಬೀಜಗಳ ಚೆಲ್ಲಿ
ತೇರ ಮಿಣಿ ಹಾಸಿರಲು
ಹಿಡಿದುಕೊಳ್ಳಿರೊ ಅದನು



ಜಿ.ಎಸ್.ಶಿವರುದ್ರಪ್ಪ

ಎಲ್ಲಿದ್ದರೇನು?
ಕೋಟಿ ಕೈಗಳ ಕೂಟ, ಕೋಟಿ ಕಣ್ಗಳ ನೋಟ
ಕೋಟಿ ಹೃದಯದ ಮಿಲನದಾಟದಲ್ಲಿ

ಎದೆ ಎದೆಯ ಬಿಂದಿಗೆಯ ತುಂಬ ತುಂಬಿರುವಂಥ
ಉತ್ಸಾಹದಭಿಷೇಕ ದಾರಿಯಲ್ಲಿ
ಮುಂದೆ ಬನ್ನಿರೊ ಬನ್ನಿ
ಕವಿ ಮನೋರಥಗಳನು ಬಾಳ ಬೀದಿಯ ಮೇಲೆ
ಎಳೆಯ ಬನ್ನಿ.

ಕನ್ನಡದ ತಾಯ ಮುಖಬಿಂಬ ನಿಮ್ಮೆದೆಯಲ್ಲಿ ಬಿಂಬಿಸಿರೆ
ನಂಬುಗೆಯ ತುಂಬುಗೈ ನೀಡಬನ್ನಿ.
"ಭುವನೇಶ್ವರೀ ದೇವಿ ರಥವನೇರಿದಳು"
ಜಯ್ ರಾಜೇಶ್ವರೀ ಕನ್ನಡಿಗರೊಡತೀ!"

ಓ ಎಳೆಯಿರೋ ಕನ್ನಡದ ತೇರ
ನೀವು ನಿಂತಿರುವಂಥ ನೆಲೆಗಳಿಂದ.
ನಾವೆಲ್ಲರೂ ಒಂದು: ತೇರೆಳೆವ ಜನರು.
ಆ ಊರೊ, ಈ ಊರೊ;ಹಿಂದೆಯೋ ಮುಂದೆಯೋ
ಎಲ್ಲಿಯೋ ಒಂದು ಕಡೆ ಕೈ ಹಾಕಿದವರು.

ಕನ್ನಡದ ಬಾವುಟ

ಕವಿ: ಬಿ. ಎಂ. ಶ್ರೀಕಂಠಯ್ಯ

ಏರಿಸಿ, ಹಾರಿಸಿ, ಕನ್ನಡದ ಬಾವುಟ!
ಓಹೊ, ಕನ್ನಡನಾಡು, ಆಹ ಕನ್ನಡನುಡಿ!
ಹಾರಿಸಿ, ತೋರಿಸಿ, ಕೆಚ್ಚೆದೆಯ ಬಾವುಟ!



ಬಿ.ಎಂ.ಶ್ರೀಕಂಠಯ್ಯ

ಕನ್ನಡದ ಬಾವುಟವ ಹಿಡಿಯದವರಾರು?
ಕನ್ನಡದ ಬಾವುಟಕೆ ಮಡಿಯದವರಾರು?
ನಮ್ಮ ಈ ಬಾವುಟಕೆ ಮಿಡಿಯದವರಾರು?
ಹೇಳಿರೋ ಹೆಸರೊಂದು ನೆನಹಿನಲಿ ಸುಳಿದರೆ!
ಹುಡುಕಿರೋ ಹೇಡಿ ತಾನೊಬ್ಬ ಮನೆಗುಳಿದರೆ!

ಏಳಿರೋ, ಬಾಳಿರೋ,
ಕನ್ನಡದ ಬಾವುಟವ ಹಿಡಿಯಿರೋ, ನಡೆಯಿರೋ!
ಏಳ್ ಕನ್ನಡ ತಾಯ್,
ಬಾಳ್ ಕನ್ನಡ ತಾಯ್,
ಆಳ್ ಕನ್ನಡ ತಾಯ್,
ಕನ್ನಡಿಗರೊಡತಿ, ಓ ರಾಜೇಶ್ವರೀ!

ಇಂದಿನದೆ ಹೇಳಿರೋ ಈ ನಮ್ಮ ಬಾವುಟ!
ಕುಂದಿಹುದೆ ನೋಡಿರೋ ಈ ನಮ್ಮ ಬಾವುಟ!
ಕಂದದಿದೆ ಇಂದಿಗೂ ಕನ್ನಡದ ಬಾವುಟ!
ಏನೇನ ಕಂಡುದೋ ಬಾನಾಡಿ ಬಾವುಟ!
ಆವುದನು ಕಾಣದೋ ಜೀವಕಳೆ ಬಾವುಟ
ಕನ್ನಡದ ಬಾವುಟಗಳೊಂದಾದ ಬಾವುಟ!

ಏರಿಸಿ, ಹಾರಿಸಿ, ತೋರಿಸಿ ಬಾವುಟ!
ತೇಲಾಡು, ಮೇಲಾಡು, ಓಲಾಡು, ಬಾವುಟ!
ಚೆಲುವಾಗು, ಗೆಲುವಾಗು, ಬಲವಾಗು, ಬಾವುಟ
ಹೊನ್ನಾಗಿ, ಹೆಣ್ಣಾಗಿ, ಹಸನಾದ ಮಣ್ಣಾಗಿ,
ಹೊಸಹೊಸತು ಕಣ್ಣಾಗಿ, ಬೆಳಕಾಗಿ ಬೆಳೆಯಾಗಿ,

ಕೂಡುತಿಹ ಕನ್ನಡದ ಹೊಮ್ಮುಗೆಯ ಕಾವಾ!
ಪರಿಪರಿಯ ಹೊಂಬಗೆಯ ಹೆರಿಗೆಯಾ ನೋವಾ!,
ಸಿರಿಯ ಜಯಚಾಮನಾ ಹಿರಿಯೊಲುಮೆ ಹೂವಾಗಿ
ಬಾಳು ಎಲೆ ಬಾವುಟ!
ಬಾಳ್ ಕನ್ನಡ ತಾಯ್,
ಏಳ್ ಕನ್ನಡ ತಾಯ್,
ಆಳ್ ಕನ್ನಡ ತಾಯ್,
ಕನ್ನಡಿಗರೊಡತಿ ಓ ರಾಜೇಶ್ವರೀ!

ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು

ಕವಿ : ಹುಯಿಲಗೋಳ ನಾರಾಯಣರಾಯರು

ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು
ಬದುಕು ಬಲುಹಿನ ನಿಧಿಯು ಸದಭಿಮಾನದ ಗೂಡು

ರಾಜನ್ಯರಿಪು ಪರಶುರಾಮನಮ್ಮನ ನಾಡು
ಆ ಜಲಧಿಯನೆ ಜಿಗಿದ ಹನುಮನುದಿಸಿದ ನಾಡು
ಓಜೆಯಿಂ ಮೆರೆದರಸುಗಳ ಸಾಹಸದ ಸೂಡು
ತೇಜವನು ನಮಗೀವ ವೀರವೃಂದದ ಬೀಡು

ಲೆಕ್ಕಿಗಮಿತಾಕ್ಷರರು ಬೆಳೆದು ಮೆರೆದಿಹ ನಾಡು
ಜಕ್ಕಣನ ಶಿಲ್ಪಕಲೆಯಚ್ಚರಿಯ ಕರುಗೋಡು
ಚೊಕ್ಕ ಮತಗಳ ಸಾರಿದವರಿಗಿದು ನೆಲೆವೀಡು
ಚೊಕ್ಕಸದ ಕಣಜವೈ ವಿದ್ವತ್ತೆಗಳ ಕಾಡು

ಪಾವನೆಯರಾ ಕೃಷ್ಣೆ ಭೀಮೆಯರ ತಾಯ್ನಾಡು
ಕಾವೇರಿ ಗೋದೆಯರು ಮೈದೊಳೆವ ನಲುನಾಡು
ಅವಗಂ ಸ್ಫೂರ್ತಿಸುವ ಕಬ್ಬಿಗರ ನಡೆಮಾಡು
ಕಾವ ಗದುಗಿನ ವೀರನಾರಾಯಣನ ಬೀಡು

ಹುಯಿಲಗೋಳ ನಾರಾಯಣರಾಯರು

ಕನ್ನಡ ವಿಶ್ವವಿದ್ಯಾ [illegible] ದವಿ ಮಟ್ಟದವರೆಗೆ ಉತ್ತಮ ಹಾಗೂ ಉಪಯುಕ್ತ [illegible] ನ್ನು ನಿರ್ಮಾಣ ಮಾಡುವ [illegible] ವಾಗಿ 'ಪಠ್ಯಪುಸ್ತಕ ರಚನಾ ವಿಭಾಗ'ವನ್ನು ತ [illegible] ಲ ಪ್ರಯತ್ನವಾಗಿ ನವಸಾಕ್ಷ [illegible] ಗಾಗಿ ಪಠ್ಯಪುಸ್ತಕ ರಚನೆ ಮಾಡಬೇಕೆಂದು [illegible] ಬಲಕ್ಕೆ ಬಂದುದು ಲೋಕ ಶಿ [illegible] ಯ ನವಸಾಕ್ಷರರಿಗಾಗಿ ಪುಸ್ತಕ ಬರೆಸುವ [illegible] ಜನೆಯನ್ನು ಅವರು ನಮ್ಮ ವಿಶ್ [illegible] ಕ್ಕೆ ವಹಿಸಿಕೊಟ್ಟರು. ವಿಶ್ವವಿದ್ಯಾಲಯ [illegible] ಯನ್ನು ಸಂತಸದಿಂದ ಸ್ವೀಕರಿಸಿ, ಕೂಡ [illegible] ಪ್ರಖ್ಯಾತ ಲೇಖಕರನ್ನು, ಭಾಷಾತಜ್ಞರನ್ನು, [illegible] ನ್ನು ಒಳಗೊಂಡಂತೆ ಸಲಹಾ ಸಮಿ [illegible] ವರೆಲ್ಲರ ಅಭಿಪ್ರಾಯ, ಸಲಹೆ, ಸಹಕಾರಗ [illegible] ಕಾರ್ಯೋನ್ಮುಖವಾಯಿತು [illegible] ಸೆ, ಮುದ್ರಣ ವಿನ್ಯಾಸ, ಚಿತ್ರಗಳ ಮಹತ್ವ [illegible] ತ್ಮಕ ಗುಣಮಟ್ಟ ಇತ್ಯಾದಿಗ [illegible] ಅನೇಕ ಸಲ ಚರ್ಚಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸೂಚಿಸಿ [illegible]

ನವಸಾಕ್ಷರರಿಗಾಗಿ [illegible] ಲ್ಲಿ ಹಾಗೂ [illegible] ಗಲೇ ಪ್ರಕಟವಾಗಿರುವ ಪುಸ್ತಕಗಳನ್ನೆಲ್ಲ [illegible] ಭಾಷಾತಜ್ಞರಿಂದ ಪರಿಶೀಲಿಸಲಾಯಿ [illegible] ಮಿಸಿಕೊಂಡು ಅವರಿಗೆ ಕಮ್ಮಟಗಳನ್ನು ನಡೆಸಿ ಪ್ರ [illegible] ಂತ ಆಯ್ದ ಜಿಲ್ಲೆ, ತಾಲೂಕುಗಳಿಗೆ ಕಳುಹಿ [illegible] ತ್ತಿರುವವರಿಂದ ಅದರ ಗುಣದೋಷಗಳ ಬಗ್ಗೆ [illegible] ಲ್ಲಿ ವಿಶ್ವವಿದ್ಯಾಲಯದ ಗಣಕಯಂತ್ರದಲ್ಲಿ ವಿ [illegible] ಸಹಾಯಕರು ನೀಡಿದ್ದ ಮಾಹಿತಿಗಳನ್ನೆಲ್ಲ [illegible] ನವಸಾಕ್ಷರರ ಅಪೇಕ್ಷೆಗೆ ಅನುಗುಣವಾಗಿ ವಿಷಯದ ಆದ್ಯತೆಗಳನ್ನು ನಿರ್ಧ [illegible] ತೊಡಗ [illegible] ಪ್ರಖ್ಯಾತ ಲೇಖಕರು ನಮ್ಮ ವಿಶ್ವವಿದ್ಯಾಲಯದ ಪ್ರಾಧ್ಯಾ [illegible] ಜೊತೆ ಚ [illegible] ತಮ್ಮ ಹಸ್ತಪ್ರತಿಗಳಿಗೆ ಅಂತಿಮ ರೂಪ ಕೊಟ್ಟರು. ಕಲಾವಿದರು ವಿಷಯಗಳಿಗೊಪ್ಪುವ ಚಿತ್ರಗಳನ್ನು ಬರೆದುಕೊಟ್ಟರು. ಹೀಗೆ ಸಿದ್ಧಗೊಂಡ ಹಸ್ತಪ್ರತಿಗಳನ್ನು ನವಸಾಕ್ಷರರ ಬಳಿ ಕೊಂಡೊಯ್ದು ಅವರ ಮುಂದೆ ಪಠಿಸಿ ನಂತರ ಅವರ ಅಭಿಪ್ರಾಯ, ಪ್ರತಿಕ್ರಿಯೆಗಳನ್ನು ಅಳವಡಿಸಿ ಹಸ್ತಪ್ರತಿಯನ್ನು ಅಂತಿಮಗೊಳಿಸಲಾಯಿತು.

ನಮ್ಮ ಬಹುಸಂಖ್ಯಾತ ಸಮುದಾಯ ಅನಕ್ಷರಸ್ಥರೇ ಹೊರತು ಅವಿದ್ಯಾವಂತರಲ್ಲ. ನೃಪತುಂಗ ಹೇಳುವಂತೆ ಅವರು "ಚದುರರ್ ನಿಜದಿಂ ಕುರಿತೋದದೆಯುಂ ಕಾವ್ಯ ಪ್ರಯೋಗ ಪರಿಣತ ಮತಿಗಳ್". ಅನುಭವದಲ್ಲಿ, ವಿವೇಕದಲ್ಲಿ, ವ್ಯವಹಾರದಲ್ಲಿ, ತಿಳುವಳಿಕೆಯಲ್ಲಿ ಆ ಜನ ಚದುರರು. ಹೀಗೆಂದು ಅವರನ್ನು ಅಕ್ಷರದಲಿತರನ್ನಾಗಿಯೂ ಉಳಿಸುವಂತಿಲ್ಲ. ಅವರಲ್ಲಿ ಅಕ್ಷರ ಕಲಿಯುವ ಸಾಮರ್ಥ್ಯವಿದೆ. ಕಲಿಸುವ ಹೊಣೆ ಸರ್ಕಾರಗಳ, ವಿಶ್ವವಿದ್ಯಾಲಯಗಳ ಮೇಲಿದೆ. ಈ ನಿಟ್ಟಿನಲ್ಲಿ ದೇಶದಾದ್ಯಂತ ಸಾಕ್ಷರತಾ ಆಂದೋಲನ ನಡೆಯುತ್ತಿದೆ. ಆದರೆ ಈ ಅಕ್ಷರ ಸಂಸ್ಕೃತಿಯ ಆಂದೋಲನದಲ್ಲಿ ಕಲಿತವರಿಗೆ ಮತ್ತು ಕಲಿಯುವವರಿಗೆ ಉತ್ತಮ ಗುಣಮಟ್ಟದ ಪುಸ್ತಕಗಳ ಅವಶ್ಯಕತೆ ಇದೆ. ಕಲಿತವರು ಮರೆಯದಂತೆ, ಕಲಿಕೆಯನ್ನು ಮುಂದುವರಿಸುವಂತೆ ನೋಡಿ ಕೊಳ್ಳುವುದು ಎಲ್ಲರ ಕರ್ತವ್ಯ.

ಕನ್ನಡ ವಿಶ್ವವಿದ್ಯಾಲಯವು ನಾಡಿನ ಹಲವು ವಿದ್ವಾಂಸರೊಂದಿಗೆ ಸೇರಿ ನಡೆಸಿದ ಒಂದು ಸಾಮೂಹಿಕ ಪ್ರಯತ್ನದ ಫಲವಾಗಿ ಈ ಪುಸ್ತಕ ರೂಪತಾಳಿದೆ. ನವಸಾಕ್ಷರರು ಈ ಪುಸ್ತಕವನ್ನು ಪ್ರೀತಿಯಿಂದ ಸ್ವೀಕರಿಸುತ್ತಾರೆಂದು ನಂಬಿದ್ದೇವೆ. ಈ ಯೋಜನೆಯ ಯಶಸ್ಸಿಗೆ ಕಾರಣರಾಗಿರುವ ಉನ್ನತ ಸಲಹಾ ಸಮಿತಿ ಹಾಗೂ ಸಂಪಾದಕ ಸಮಿತಿಯ ಸದಸ್ಯರಿಗೆ, ಲೇಖಕರಿಗೆ, ಕಲಾವಿದರಿಗೆ ಹಾಗೂ ಈ ಯೋಜನೆಯಲ್ಲಿ ಪ್ರತ್ಯಕ್ಷವಾಗಿ, ಪರೋಕ್ಷವಾಗಿ ನಮ್ಮೊಡನೆ ಪಾಲ್ಗೊಂಡವರೆಲ್ಲರಿಗೂ ನಮ್ಮ ಹೃತ್ಪೂರ್ವಕವಾದ ವಂದನೆಗಳು. ನಮ್ಮ ವಿಶ್ವವಿದ್ಯಾಲಯದ ಮೇಲೆ ವಿಶ್ವಾಸವಿಟ್ಟು ಇಂತಹ ಒಂದು ಗುರುತರವಾದ ಯೋಜನೆಯನ್ನು ವಹಿಸಿಕೊಟ್ಟ ಲೋಕಶಿಕ್ಷಣ ಇಲಾಖೆಯ ನಿರ್ದೇಶಕರಾದ ಶ್ರೀ ಲೂಕೋಸ್ ವಲ್ಲತ್ತರೈ ಅವರಿಗೆ ನನ್ನ ಕೃತಜ್ಞತೆಗಳು. ಓದುಗರು ಈ ಪುಸ್ತಕದ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ತಿಳಿಸಿದರೆ ನಮ್ಮ ಪಠ್ಯಪುಸ್ತಕ ರಚನೆಗೆ ಉಪಯೋಗವಾಗುತ್ತದೆ.

ಚಂದ್ರಶೇಖರ ಕಂಬಾರ
ಕುಲಪತಿಗಳು